# ಕುಂದಾಪುರ: ಕುಂದಾಪುರ ರೂರಲ್ ಆಯುರ್ವೇದ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆಗೆ ಸಚಿವರ ಭೇಟಿ

ಶ್ರೀಯುತ ಅಶ್ವಥ್ ನಾರಾಯಣ್ ಸಿ ಏನ್, ಮಾಜಿ ಉಪಮುಖ್ಯ ಮಂತ್ರಿ, ಉನ್ನತ ಶಿಕ್ಷಣ ಇಲಾಖೆ ಸಚಿವರು, ಇಲೆಕ್ಟ್ರಾನಿಕ್ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯ ಅಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖಾ ಸಚಿವರು, ಕರ್ನಾಟಕ ಸರ್ಕಾರ ಸಂಸ್ಥೆಗೆ ಭೇಟಿ ನೀಡಿ ಕಾಲೇಜಿನ ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಶುಭ ಹಾರೈಸುವುದರ ಜೊತೆಗೆ ಆಯುರ್ವೇದ ಮತ್ತು ಯೋಗದ ಮಹತ್ವವನ್ನು ಅಖಂಡ ಭಾರತದಲ್ಲಿ ಮಾತ್ರವಲ್ಲದೆ ವಿಶ್ವದ ಎಲ್ಲೆಡೆ ಪ್ರಚಾರಗೊಳಿಸುವಲ್ಲಿ ವಿದ್ಯಾರ್ಥಿಗಳು ತೊಡಗಿಸಿಕೊಳ್ಳಬೇಕೆಂದು ವಿಶ್ಲೇಷಿಸಿದರು. ನೂತನವಾಗಿ ಆರಂಭಿಸಿದ ಈ ಕುಂದಾಪುರ ಆಯುರ್ವೇದ ೧೦೦ ಹಾಸಿಗೆಯ ಸುಸಜ್ಜಿತವಾದ ಆಸ್ಪತ್ರೆಯನ್ನು ಹೊಂದಿದ್ದು ಆಯುರ್ವೇದ ಚಿಕಿತ್ಸೆಯ ಸೌಲಭ್ಯಗಳನ್ನು ಗ್ರಾಮೀಣ ಭಾಗದ ಜನರಿಗೆ ತಲುಪಿಸುವಲ್ಲಿ ಈ ಸಂಸ್ಥೆಯು ಮಾಡುತ್ತಿರುವ ಕಾರ್ಯ ನಿಜಕ್ಕೂ ಶ್ಲಾಘನೀಯ ಎಂದರು. ಈ ಕಾರ್ಯಕ್ರಮದಲ್ಲಿಉದ್ಯಮಿ ಹಾಗೂ ಅಮೃತೇಶ್ವರಿ ಎಜುಕೇಷನಲ್ ಟ್ರಸ್ಟ್ ಮೂಲಕ ಆಯುರ್ವೇದ ಕಾಲೇಜು ನಡೆಸುತ್ತಿರುವ ಶ್ರೀಯುತ ಉದಯಕುಮಾರ್ ಶೆಟ್ಟಿ ಮತ್ತು ಶ್ರೀಯುತ ವಿನಯ್ ಕುಮಾರ್ ಶೆಟ್ಟಿ ಉಪಸ್ಥಿತರಿದ್ದರು. ಕಾಲೇಜಿನ ಪ್ರಾಂಶುಪಾಲರಾದ ಡಾ. ಎಸ್. ಜಿ ಪ್ರಸನ್ನ ಐತಾಳ್ ಅವರು ಮಾನ್ಯ ಸಚಿವರನ್ನು ಸ್ವಾಗತಿಸಿದರು. ಮುಖ್ಯ ಆಡಳಿತಾಧಿಕಾರಿ ಶ್ರೀ ಅಭಿನಂದನ್ ಶೆಟ್ಟಿ, ಸಿ. ಎಫ್. ಓ ಶ್ರೀ ನಾಗರಾಜ್ ಶೆಟ್ಟಿ ಮತ್ತು ಕಾಲೇಜಿನ ಅಧ್ಯಾಪಕ, ಅಧ್ಯಾಪಕೇತರ ವೃಂದದವರು ಹಾಗೂ ಪ್ರಥಮ ವರ್ಷದ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.